# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1214
2. ಸದಸ್ಯರ ಹೆಸರು : ಶ್ರೀ ಎನ್ ರವಿಕುಮಾರ್
3. ಉತ್ತರಿಸಬೇಕಾದ ದಿನಾಂಕ : 29.12.2022
4. ಉತ್ತರಿಸುವ ಸಚಿವರು : ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಸಣ್ಣ ನೀರಾವರಿ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೊಪ್ಪಳ ಜಿಲ್ಲೆಯ ಗಂಗಾವತಿ ವಿಧಾನಸಭೆ ವ್ಯಾಪ್ತಿಯ ಕೆರೆಗಳ ಅಭಿವೃದ್ಧಿ ನೈಜತೆಯನ್ನು ಪರಿಶೀಲಿಸದೆ 13.5 ಕೋಟಿ ಮೊತ್ತದ ನಕಲಿ ಬಿಲ್ಲುಗಳನ್ನು ಸೃಷ್ಟಿಸಿ ಸರ್ಕಾರದಿಂದ ಗುತ್ತಿಗೆದಾರರು ಹಣ ಪಡೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; | ಗಮನಕ್ಕೆ ಬಂದಿದೆ.<br><br>ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ರೂ.13.50 ಕೋಟಿ ಮೊತ್ತದ ಕೆರೆಗಳ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದ ಬಗ್ಗೆ ದೂರು ಸ್ವೀಕೃತವಾದ ಹಿನ್ನಲೆಯಲ್ಲಿ ಪರಿಶೀಲಿಸಲು ಅಧೀಕ್ಷಕ ಇಂಜಿನಿಯರ್, ಸಣ್ಣ ನೀರಾವರಿ ವೃತ್ತ, ಬೆಳಗಾವಿ ಇವರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿರುತ್ತದೆ.<br><br>ಸದರಿ ಸಮಿತಿಯು ದಿನಾಂಕ:03.06.2022 ಮತ್ತು 04.06.2022 ರಂದು ಕಾಮಗಾರಿಗಳ ಪರಿವೀಕ್ಷಣೆ ಕೈಗೊಂಡು ಅಂಶವಾರು ಸೂಚನೆಗಳನ್ನು ನೀಡಿ, ಪಾಲಿಸಲು ತಿಳಿಸಿರುತ್ತದೆ ಹಾಗೂ ಕಾಮಗಾರಿಗಳ ನ್ಯೂನತೆಗಳನ್ನು ಸರಿಪಡಿಸಲು ಸೂಚಿಸಿರುತ್ತದೆ. |
| ಆ | ಕೊಪ್ಪಳ ಜಿಲ್ಲೆಯ ಗಂಗಾವತಿ ವಿಧಾನಸಭೆ ವ್ಯಾಪ್ತಿಯ 14 ಗ್ರಾಮಗಳ ಕೆರೆಗಳ ಅಭಿವೃದ್ಧಿಯಲ್ಲಿ ಅವ್ಯವಹಾರವಾದ ಕುರಿತು ಸರ್ಕಾರಕ್ಕೆ ದೂರು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ದೂರಿನ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಸದರಿ ಸಮಿತಿಯು ದಿನಾಂಕ:30.6.2022ರಂದು ವರದಿ ಸಲ್ಲಿಸಿದ್ದು, ವರದಿಯಲ್ಲಿ "ಈ ಸಂದರ್ಭದಲ್ಲಿ ಹಣವನ್ನು ದುರುಪಯೋಗವಾಗಿರುತ್ತದೆ ಎಂದು ಮಾಡಿರುವ ಆರೋಪವು ಮಾಹಿತಿ ಕೊರತೆಯಿಂದ ಆಗಿಬರಬಹುದೆಂದು" ತಿಳಿಸಿದೆ.<br><br>ಸಮಿತಿಯ ವರದಿ ಸ್ವೀಕೃತವಾಗಿದ್ದು, ಪರಿಶೀಲನೆಯಲ್ಲಿದೆ. |
| ಇ | ಕೊಪ್ಪಳ ಜಿಲ್ಲೆಯ ಗಂಗಾವತಿ ವಿಧಾನಸಭೆ ವ್ಯಾಪ್ತಿಯ 14 ಗ್ರಾಮಗಳ ಕೆರೆಗಳನ್ನು ಆರ್.ಡಿ.ಪಿ.ಆರ್. ಇಲಾಖೆಯ ಉದ್ಯೋಗ ಖಾತ್ರಿ ಯೋಜನೆಯ ಅನ್ವಯ ಕಾಮಗಾರಿಗಳನ್ನು ಕೈಗೊಂಡಿದ್ದು, ಮತ್ತೆ ಅದೇ ಕಾಮಗಾರಿಗಳನ್ನು ಸಣ್ಣ ನೀರಾವರಿ ಇಲಾಖೆಯ ಮೂಲಕ ಕೈಗೊಂಡಿರುವುದಾಗಿ ಬೋಗಸ್ ಬಿಲ್ಲುಗಳನ್ನು ಸೃಷ್ಟಿಸಿರುವ ಕುರಿತು ಸರ್ಕಾರದ ನಿಲುವೇನು? (ವಿವರ ನೀಡುವುದು) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲವು ಕೆರೆಗಳಲ್ಲಿ ಅಲ್ಪ ಪ್ರಮಾಣದಲ್ಲಿ ಹೂಳು ತೆಗೆದಿದ್ದು, ಸದರಿ ಇಲಾಖೆ ಹೂಳು ತೆಗೆದ ಸ್ಥಳಗಳನ್ನು ಬಿಟ್ಟು ಉಳಿದ ಸ್ಥಳಗಳಲ್ಲಿ ಕಾಮಗಾರಿಯನ್ನು ನಿರ್ವಹಿಸಲಾಗಿದೆ ಹಾಗೂ ಬೋಗಸ್ ಬಿಲ್ ಸೃಷ್ಟಿಸಿರುವುದಿಲ್ಲ. |

ಕಡತ ಸಂಖ್ಯೆ:MID 185 LCQ 2022

(ಜೆ.ಸಿ.ಮಾಧುಸ್ವಾಮಿ)
ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ
ಶಾಸನ ರಚನೆ ಮತ್ತು ಸಣ್ಣ ನೀರಾವರಿ ಸಚಿವರು.